# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ - ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು - 560 002.**

ಸಂಖ್ಯೆ: BBMP/Addl.Dir/JDNORTH/0277/2012-13 ದಿನಾಂಕ: 25-11-2014

## ಪ್ರಾರಂಭಿಕ ಪ್ರಮಾಣಪತ್ರ

**ವಿಷಯ:** ಆಸ್ತಿ ಸಂಖ್ಯೆ 659/406, ವೈಟ್‌ಫೀಲ್ಡ್ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ನಂ. 84, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0277/2012-13 ದಿನಾಂಕ: 17-04-2014

2) ತಮ್ಮ ಮನವಿ ಪತ್ರ ದಿನಾಂಕ: 02-08-2014

* * * * * * * *

ಆಸ್ತಿ ಸಂಖ್ಯೆ 659/406, ವೈಟ್‌ಫೀಲ್ಡ್ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ನಂ. 84, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ತಳ + ನೆಲ + ಮೇಲಿನ 4 ಅಂತಸ್ತುಗಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 17-04-2014 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ತಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 19-09-2014. ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 73,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2014-15/Oct/0052 ದಿನಾಂಕ: 21-10-2014 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
4. ದಿನಾಂಕ: 25-11-2014 ರ ಮಾನ್ಯ ಆಯುಕ್ತರು ರವರ ಅನುಮೋದನೆಯಂತೆ ಮೂರು ತಿಂಗಳ ನಂತರ ಉದ್ಯಾನವನ ಹಾಗೂ ಬಯಲು ಜಾಗದ ಶುಲ್ಕ ರೂ. 68,35,000/- ಗಳನ್ನು ಪಾಲಿಕೆಗೆ ಪಾವತಿಸುವುದು

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ - ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,
ಶ್ರೀ ಹೆಚ್.ಎನ್.ಮುನಿಸ್ವಾಮಪ್ಪ ಬಿನ್ ಹೆಚ್.ಎಂ.ನಾರಾಯಣಪ್ಪ
\# 659/406, ವೈಟ್‌ಫೀಲ್ಡ್ ಗ್ರಾಮ, ಕೆ.ಆರ್.ಪುರಂ ಹೋಬಳಿ,
ವಾರ್ಡ್ ನಂ. 84, ಮಹದೇವಪುರ ವಲಯ,
ಬೆಂಗಳೂರು.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು (ಮಹದೇವಪುರ ವಲಯ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ವೈಟ್‌ಫೀಲ್ಡ್ ಉಪ-ವಲಯ) ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ

25/11/14

ಜಂಟಿ ನಿರ್ದೇಶಕರು (ನಗರ ಯೋಜನೆ - ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

25/11/14

Scanned by CamScanner